ಚಿಕ್ಕಬಳ್ಳಾಪುರಕ್ಕೆ ವೋಲ್ವೋ ಮತ್ತು ಬೆಂಜ್ ಬಸ್ಸುಗಳ ಸೌಲಭ್ಯ

824 (714) ಶ್ರೀ ಕೆ.ಪಿ. ಬಚ್ಚೇಗೌಡ (ಚಿಕ್ಕಬಳ್ಳಾಪುರ) : ಮಾನ್ಯ ಗೃಹ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ನಗರವು ಜಿಲ್ಲಾ ಕೇಂದ್ರವಾಗಿದ್ದು, ಇಲ್ಲಿಂದ ಪ್ರತಿನಿತ್ಯ ಸಾವಿರಾರು ಪ್ರಯಾಣಿಕರು ಪ್ರಯಾಣ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಕೆಂಪೇಗೌಡ ಬಸ್ ನಿಲ್ದಾಣದಿಂದ ಚಿಕ್ಕಬಳ್ಳಾಪುರ ಮಾರ್ಗವಾಗಿ ಬಾಗೇಪಲ್ಲಿಗೆ ವೋಲ್ವೋ ಮತ್ತು ಬೆಂಜ್ ಬಸ್ಸುಗಳ ಸೌಲಭ್ಯವನ್ನು ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ, ವೋಲ್ವೋ ಮತ್ತು ಬೆಂಜ್ ಬಸ್‌ಗಳ ಸೌಲಭ್ಯವನ್ನು ಯಾವಾಗ ಪ್ರಾರಂಭಿಸಲಾಗುವುದು;

ಈ) ಚಿಕ್ಕಬಳ್ಳಾಪುರ ಮಾರ್ಗವಾಗಿ ಬಾಗೇಪಲ್ಲಿಗೆ ಸುಸಜ್ಜಿತ ಸಾರಿಗೆ ಸಂಪರ್ಕವನ್ನು ಕಲ್ಪಿಸುವುದರಿಂದ ಸಾರ್ವಜನಿಕ ಪ್ರಯಾಣಿಕರಿಗೆ ಅನುಕೂಲವಾಗುವುದಿಲ್ಲವೇ;

ಉ) ಹಾಗಿದ್ದಲ್ಲಿ, ಸುಸಜ್ಜಿತ ಸಾರಿಗೆ ಸೌಲಭ್ಯವನ್ನು ಕಲ್ಪಿಸಲು ಸರ್ಕಾರಕ್ಕಿರುವ ತೊಂದರೆಗಳೇನು?

ಶ್ರೀ ಆರ್. ಅಶೋಕ (ಗೃಹ ಮತ್ತು ಸಾರಿಗೆ ಸಚಿವರು) :

ಅ) ಹೌದು.

ಆ) ಮತ್ತು ಇ)

ಇಲ್ಲ.

ಈ) ಮತ್ತು ಉ)

ಬೆಂಗಳೂರಿನಿಂದ ಚಿಕ್ಕಬಳ್ಳಾಪುರ ಮುಖೇನ ಬಾಗೇಪಲ್ಲಿ ಮಾರ್ಗದಲ್ಲಿ ಪ್ರತಿಷ್ಠಿತ ಐರಾವತ (ವೋಲ್ವೋ) ಮತ್ತು ಬೆಂಜ್ ಸಾರಿಗೆಗಳನ್ನು ಒದಗಿಸಿ ಕೊಡುವುದು ಸದರಿ ಮಾದರಿಯ ಬಸ್ಸುಗಳ ಕಾರ್ಯಾಚರಣೆಯ ವೆಚ್ಚ ಮತ್ತು ಆದಾಯದ ದೃಷ್ಟಿಯಿಂದ ಸೂಕ್ತವಲ್ಲ. ಈ ಕಾರಣದಿಂದಾಗಿ, ಐರಾವತ (ವೋಲ್ವೋ) ಮತ್ತು ಬೆಂಜ್ ಬಸ್ಸುಗಳನ್ನು ಸದರಿ ಮಾರ್ಗದಲ್ಲಿ ಕಾರ್ಯಾಚರಣೆಗೊಳಿಸುವುದು ಕಷ್ಟ ಸಾಧ್ಯ.